# ಕನ್ನಡ ಸಾಹಿತ್ಯ ಪರಿಷತ್ತು

ಪಂಪ ಮಹಾಕವಿ ರಸ್ತೆ, ಚಾಮರಾಜಪೇಟೆ, ಬೆಂಗಳೂರು – ೫೬೦ ೦೧೮
ದೂರವಾಣಿ : ೦೮೦ ೨೬೬೧೨೯೯೧, ೨೬೬೨೩೫೮೪ ಫ್ಯಾಕ್ಸ್ : ೨೬೫೨೩೮೬೭
http://www.kasapa.in e-mail : kannadaparishattu@gmail.com


ಕ್ರಮಸಂಖ್ಯೆ : ಕಸಾಪ / **ಪ್ರಕಟಣೆ**/ ೨೦೨೨–೨೩ ದಿನಾಂಕ : ೨೦-೧೨-೨೦೨೨

*ಇವರಿಗೆ*
**ಸಂಪಾದಕರು / ಮುಖ್ಯ ವರದಿಗಾರರು**
.................................................ಬೆಂಗಳೂರು

## ಪ್ರಕಟಣೆಯ ಕೃಪೆಗಾಗಿ

# ಬೆಳಗಾವಿ ಅಧಿವೇಶನದಲ್ಲೇ ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ ವಿದೇಯಕ-೨೦೨೨ ಅಂಗೀಕಾರಕ್ಕೆ ನಾಡೋಜ. ಡಾ.ಮಹೇಶ ಜೋಶಿ ಆಗ್ರಹ

ಬೆಂಗಳೂರು: 'ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ ವಿಧೇಯಕ-೨೦೨೨; ವನ್ನು ಕಾನೂನು ಮಾಡುವ ಎಲ್ಲಾ ಭರವಸೆಯನ್ನು ಸರಕಾರ ನೀಡಿದೆ. ಬೆಳಗಾವಿಯಲ್ಲಿ ನಡೆಯುತ್ತಿರುವ ಚಳಿಗಾಲದ ಅಧಿವೇಶನದಲ್ಲಿ ಕನ್ನಡದ ಬೆಳವಣಿಗೆಗೆ ಅಸ್ತ್ರವಾಗಿರುವ ಕಾನೂನು ಬರಲಿದೆ ಎನ್ನುವ ಭರವಸೆಯನ್ನು ಕನ್ನಡ ಸಾಹಿತ್ಯ ಪರಿಷತ್ತು ಹೊಂದಿದೆ. ಈ ಹಿನ್ನೆಲೆಯಲ್ಲಿ ಆಡಳಿತ ಹಾಗೂ ವಿರೋಧ ಪಕ್ಷದ ನಾಯಕರನ್ನು ಭೇಟ್ಟಿ ಮಾಡಿ ವಿಧೇಯಕದ ಮಹತ್ವವನ್ನು ತಿಳಿಸಲಾಗಿದೆ ಎಂದು **ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ನಾಡೋಜ ಡಾ. ಮಹೇಶ ಜೋಶಿ** ತಿಳಿಸಿದ್ದಾರೆ.

ಈಗಾಗಲೇ ವಿಧಾನ ಸಭೆಯಲ್ಲಿ ಮಂಡನೆ ಮಾಡಲಾಗಿರುವ 'ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ ವಿಧೇಯಕ-೨೦೨೨'ಅನ್ನು ಈ ಬಾರಿಯ ಚಳಿಗಾಲದ ಅಧಿವೇಶನದಲ್ಲಿ ಚರ್ಚೆಗೆ ಬಂದು ಉಭಯ ಪಕ್ಷಗಳು ವಿಧಾನ ಸಭೆಯಲ್ಲಿ ವಿಧೇಯಕದ ಸಾಧಕ ಬಾಧಗಳ ಕುರಿತು ಸಮಗ್ರ ಚರ್ಚೆ ನಡೆಸಿ ಸದನದಲ್ಲಿ ಸರ್ವಾನುಮತದ ಒಪ್ಪಿಗೆಯ ಮೇರೆಗೆ ಕಾನೂನು ರಚನೆ ಆಗಲಿದೆ. ಈ ಮೂಲಕ ಕನ್ನಡಿಗರಿಗೆ ಕನ್ನಡ ಉಳಿಸಿಕೊಳ್ಳಲು ಆನೆ ಬಲ ಬಂದಂತಾಗುವುದು ಜೊತೆಗೆ ಶೀಘ್ರವೆ ಈ ಕಾನೂನು ರಚನೆ ಆಗುವುದು ಎಂಬ ನಂಬಿಕೆ ಇದೆ ಎಂಬ ಅಭಿಪ್ರಾಯವನ್ನು **ನಾಡೋಜ ಡಾ. ಮಹೇಶ ಜೋಶಿ**ಯವರು ವ್ಯಕ್ತಪಡಿಸಿದರು.

೮೬ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನಕ್ಕೂ ಮೊದಲು 'ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ ವಿಧೇಯಕ-೨೦೨೨;ವು ಕಾನೂನಾದರೆ ಅನ್ನಡದ ಅಕ್ಷರ ಜಾತ್ರೆಗೆ ಒಂದು ಅರ್ಥ ಬರಲಿದೆ. ಈ ನಿಟ್ಟಿನಲ್ಲಿ ಕನ್ನಡ ಸಾಹಿತ್ಯ ಪರಿಷತ್ತು ಎಲ್ಲ ರೀತಿಯಲ್ಲಿ ಕಾನೂನಿನ ಅಗತ್ಯತೆಯನ್ನು ಪ್ರತಿಯೊಬ್ಬ ಜನಪ್ರತಿನಿಧಿಗೂ ಅರ್ಥವಾಗುವಂತೆ ತಿಳಿಸುವ ಪ್ರಯತ್ನವನ್ನು ಮಾಡಿದೆ. ಕನ್ನಡ ಸಾಹಿತ್ಯ ಪರಿಷತ್ತು ೧೨-೧೦-೨೦೨೨ ರಂದು 'ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ ವಿಧೇಯಕ-೨೦೨೨; ಕುರಿತಂತೆ ಕನ್ನಡದ ಮಠಗಳು, ನ್ಯಾಯಾಂಗ, ಸಾಹಿತ್ಯ, ಶಿಕ್ಷಣ, ಮಾಧ್ಯಮ, ಕಾನೂನು, ಚಲನಚಿತ್ರ ರಂಗ, ಉದ್ಯೋಗ, ಕೈಗಾರಿಕೆ, ಸೇರಿದಂತೆ ಪ್ರಮುಖ ಕ್ಷೇತ್ರಗಳ ಪರಿಣಿತರನ್ನು ಸೇರಿಸಿ 'ಚಿಂತನಾ ಗೋಷ್ಠಿ'ಯನ್ನು ಪರಿಷತ್ತು ಹಮ್ಮಿಕೊಂಡು ಸುದೀರ್ಘವಾಗಿ ಚರ್ಚಿಸಿ, ವಿಧೇಯಕದಲ್ಲಿನ ಕೆಲವು ಕಲಂಗಳು ಪರಿಷ್ಕರಣೆಯಾಗಬೇಕು ಹಾಗೂ ಸಮಗ್ರ ಕನ್ನಡಿಗರ ಪ್ರಾತಿನಿಧಿಕ ಸಂಸ್ಥೆಯಾದ ಹಾಗೂ ಎಲ್ಲ ಕನ್ನಡ ಸಂಘಗಳಿಗೆ ಮಾತೃ ಸಂಸ್ಥೆಯಾದ ಮತ್ತು ಸರಕಾರದಿಂದ 'ರಾಜ್ಯ ಸಚಿವ ಸ್ಥಾನಮಾನ' ಗೌರವವನ್ನು ಹೊಂದಿರುವ ಕೇಂದ್ರ ಕನ್ನಡ ಸಾಹಿತ್ಯ ಪರಿಷತ್ತಿನ ಚುನಾಯಿತ ಅಧ್ಯಕ್ಷರನ್ನು '**ರಾಜ್ಯಮಟ್ಟದ ಸಮಿತಿಗೆ ಉಪಾಧ್ಯಕ್ಷರಾಗಬೇಕು**' ಎಂದು ಒಕ್ಕೊರಲಿನಿಂದ ಹೇಳಿ, ಜಿಲ್ಲಾ ಸಮಿತಿಯಲ್ಲಿ ಕನ್ನಡ ಸಾಹಿತ್ಯ ಪರಿಷತ್ತಿನ ಜಿಲ್ಲಾ ಘಟಕಗಳ ಚುನಾಯಿತ ಅಧ್ಯಕ್ಷರುಗಳು ಇರುವಂತೆ, ತಾಲೂಕು ಮಟ್ಟದ ಸಮಿತಿಯಲ್ಲಿ ಕನ್ನಡ ಸಾಹಿತ್ಯ ಪರಿಷತ್ತಿನ

ತಾಲೂಕು ಘಟಕದ ಅಧ್ಯಕ್ಷರು ಕಾರ್ಯನಿರ್ವಹಿಸಬೇಕು. ಜೊತೆಗೆ ಸರಕಾರಿ ಅಧಿಕಾರೇತರ ಸದಸ್ಯರುಗಳು ಈ ಸಮಿತಿಯಲ್ಲಿ ಇರಬೇಕು ಎಂಬ ಸರ್ವಾನುಮತದ ಸಲಹೆಯನ್ನು ನೀಡಲಾಗಿದೆ.

ಅದರೊಂದಿಗೆ ಈಗಾಗಲೆ ಮುಖ್ಯಮಂತ್ರಿಗಳಾದ ಶ್ರೀ ಬಸವರಾಜ ಬೊಮ್ಮಾಯಿ, ವಿಧಾನ ಸಭೆಯ ಸಭಾಪತಿಗಳಾದ ಶ್ರೀ ವಿಶ್ವೇಶ್ವರ್ ಹಗಡೆ ಕಾಗೇರಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಚಿವರಾದ ಶ್ರೀ ವಿ ಸುನಿಲ ಕುಮಾರ್, ವಿರೋಧಿ ಪಕ್ಷದ ನಾಯಕರೂ ಮಾಜಿ ಮುಖ್ಯಮಂತ್ರಿಗಳೂ ಆಗಿರುವ ಶ್ರೀ ಸಿದ್ದರಾಮಯ್ಯ ಅವರನ್ನು ಸೇರಿದಂತೆ ಪ್ರಮುಖ ನಾಯಕರನ್ನು ಭೇಟಿ ಮಾಡಿ ವಿಧೇಯಕವನ್ನು ಕಾನೂನು ಮಾಡುವಂತೆ ಒತ್ತಾಯ ಮಾಡಲಾಗಿದೆ. ನಮ್ಮ ಬೇಡಿಕೆಯನ್ನು ಪಕ್ಷತೀತವಾಗಿ ಎಲ್ಲರೂ ಒಪ್ಪಿಕೊಂಡು ಇದು ಕನ್ನಡ ತಾಯಿಯ ಕೆಲಸ ಎಂದು ಸ್ಪಷ್ಟಾಗಿ ಒಪ್ಪಿ ಕೊಂಡಿದ್ದಾರೆ ಎಂದು **ನಾಡೋಜ ಡಾ. ಮಹೇಶ ಜೋಶಿ** ತಿಳಿಸಿದ್ದಾರೆ.

'ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ ವಿಧೇಯಕ-೨೦೨೨; ವು ಕಾನೂನು ಆದಾಗ ನಾಡಿನಲ್ಲಿ ಕನ್ನಡ ಭಾಷೆ ಕಡೆಗಣಿಸುವವರ ವಿರುದ್ಧ ಸೂಕ್ತ ಕಾನೂನು ಕುಣಿಕೆಯನ್ನು ಹಾಕಬಹುದು. ಆ ಮೂಲಕ ಕನ್ನಡ ಭಾಷೆ ಹಾಗೂ ನಾಡನ್ನು ಕಡೆಗಾಣಿಸುವವರ ಕಾನೂನು ದಂಡ ಪ್ರಯೋಗಕ್ಕೆ ಅವಕಾಶವಾಗಲಿದೆ. ಈ ಮೂಲಕ ಕನ್ನಡ ತನ್ನ ಅಸ್ಮಿತೆಯನ್ನು ಉಳಿಸಿಕೊಳ್ಳುವುದಕ್ಕೆ ಕಾರಣವಾಗಲಿದೆ ಎಂದರು.

ಪ್ರಸಕ್ತ ವಿಧೇಯಕವನ್ನು ಎಲ್ಲರೂ ಒಕ್ಕೊರಲ ಒಮ್ಮತ ನೀಡುವ ಅಂಗೀಕಾರ ಕನ್ನಡಿಗರ ಪಾಲಿನ ವಿಜಯೋತ್ಸವ ಆಗಲಿದೆ. ಆ ವಿಜಯೋತ್ಸವದ ಪ್ರತಿಬಿಂಬ ಎಂಬಂತೆ ಹಾವೆರಿಯಲ್ಲಿ ೮೬ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳ ಜರುಗಲಿದೆ. ಬೆಳಗಾವಿಯಲ್ಲಿ ನಡೆಯುತ್ತಿರುವ ಈ ಬಾರಿಯ ಅಧಿವೇಶನದ ಮೇಲೆ ಎಲ್ಲ ಸಮಸ್ತ ಕನ್ನಡಿಗರ ದೃಷ್ಟಿ ನೆಟ್ಟಿದೆ. ಕೊಟ್ಟ ಮಾತಿನಂತೆ ಸರಕಾರ ಇನ್ನೆರಡು ದಿನಗಳಲ್ಲಿ 'ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ ವಿಧೇಯಕ-೨೦೨೨; ಅನ್ನು ಕಾನೂನಾಗುವ ಭರವಸೆ ನೀಡಿದೆ ಎಂದು **ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ನಾಡೋಜ ಡಾ. ಮಹೇಶ ಜೋಶಿ** ತಿಳಿಸಿದ್ದಾರೆ.

**ಶ್ರೀನಾಥ್ ಜೆ.**

ಮಾದ್ಯಮ ಸಲಹೆಗಾರರು

ಕನ್ನಡ ಸಾಹಿತ್ಯ ಪರಿಷತ್ತು ಬೆಂಗಳೂರು